**Akashvani : Bangalore**
**National Bulletin In Kannada**
**12.06.2024 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**12.06.2024 / 7.35 am**

**<><*<><>*><>**

ಮುಖ್ಯಾಂಶಗಳು

**೧. ಬಿಜೆಪಿ ಹಿರಿಯ ನಾಯಕ ಮೋಹನ್ ಚರಣ್ ಮಾಂಝಿ ಒಡಿಶಾದ ನೂತನ ಮುಖ್ಯಮಂತ್ರಿಯಾಗಿ, ಎನ್.ಚಂದ್ರಬಾಬು ನಾಯ್ಡು ಆಂಧ್ರಪ್ರದೇಶ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣ ವಚನ ಸ್ವೀಕಾರ**

**೨. ಮುಂದಿನ ಶೈಕ್ಷಣಿಕ ವರ್ಷದಿಂದ ಉನ್ನತ ಶಿಕ್ಷಣ ಸಂಸ್ಥೆಗಳು ವರ್ಷಕ್ಕೆ ಎರಡು ಬಾರಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಬಹುದು: ಯುಜಿಸಿ ಘೋಷಣೆ**

**೩. ಕ್ರಿಕೆಟ್: ೨೦೨೪ರ ಐಸಿಸಿ ಟಿ೨೦ ವಿಶ್ವಕಪ್‌ನಲ್ಲಿ ಪಾಕಿಸ್ತಾನ ತಂಡಕ್ಕೆ ಕೆನಡಾ ವಿರುದ್ಧ ೭ ವಿಕೆಟ್ ಗೆಲುವು**

**೪. ಫುಟ್ಬಾಲ್: ಫಿಫಾ ವಿಶ್ವಕಪ್ ೨೦೨೬ ಎಎಫ್‌ಸಿ ಕ್ವಾಲಿಫೈಯರ್‌ನ ಎರಡನೇ ಸುತ್ತಿನ ಪಂದ್ಯದಲ್ಲಿ ಭಾರತ ತಂಡಕ್ಕೆ ಕತಾರ್ ವಿರುದ್ಧ ಸೋಲು**

**<><*<><>*><>**

ಫಿಫಾ ವಿಶ್ವಕಪ್ ೨೦೨೬ ಎಎಫ್‌ಸಿ ಕ್ವಾಲಿಫೈಯರ್‌ನ ಎರಡನೇ ಸುತ್ತಿನ ಮಾಡು ಇಲ್ಲವೇ ಮಡಿ ಪಂದ್ಯದಲ್ಲಿ ಭಾರತ ತಂಡದ ವಿರುದ್ಧ ಕತಾರ್ ಗೆಲುವು ಸಾಧಿಸಿದೆ. ಇದರೊಂದಿಗೆ ಭಾರತಕ್ಕೆ ತೀವ್ರ ನಿರಾಸೆ ಉಂಟಾಗಿದೆ. ದೋಹಾದ ಜಸಿಮ್ ಬಿನ್ ಹಮದ್ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಕತಾರ್ ತಂಡ ಭಾರತ ತಂಡದ ವಿರುದ್ಧ ೨-೧ ಗೋಲುಗಳ ಅಂತರದಲ್ಲಿ ಜಯ ಸಾಧಿಸಿದೆ. ಆರಂಭದಲ್ಲಿ ಅದ್ಭುತವಾಗಿ ಆಟವಾಡಿದ ಭಾರತ ತಂಡ ಲಲಿಯಂಜುವಲಾ ಚಂಗ್ಟೆ ೩೭ನೇ ನಿಮಿಷದಲ್ಲಿ ಗೋಲು ಬಾರಿಸಿದರು. ೭೩ನೇ ನಿಮಿಷದಲ್ಲಿ ಕತಾರ್ ಪರ ಯೂಸೆಫ್ ಅಯೆಮೆನ್ ಗೋಲು ಗಳಿಸಿ ಪಂದ್ಯವನ್ನು ಸಮಸ್ಥಿತಿಗೆ ತಂದರು. ನಂತರ ಆಕ್ರಮಣಕಾರಿ ಆಟವಾಡಿದ ಕತಾರ್ ೮೫ನೇ ನಿಮಿಷದಲ್ಲಿ ಅಹ್ಮದ್ ಅಲ್ ರಾವಿ ಗಳಿಸಿದ ಗೋಲಿನಿಂದ ಮುನ್ನಡೆ ಪಡೆದು ಪಂದ್ಯವನ್ನು ತನ್ನದಾಗಿಸಿಕೊಂಡಿತು. ಖ್ಯಾತ ಫುಟ್‌ಬಾಲ್ ತಾರೆ ಸುನಿಲ್ ಛೆಟ್ರಿ ಅಂತಾರಾಷ್ಟ್ರೀಯ ಫುಟ್‌ಬಾಲ್‌ಗೆ ವಿದಾಯ ಹೇಳಿರುವ ಹಿನ್ನೆಲೆಯಲ್ಲಿ ಮಹತ್ವದ ಪಂದ್ಯದಲ್ಲಿ ಭಾರತ ತಂಡವನ್ನು ಗೋಲ್‌ಕೀಪರ್ ಗುರುಪ್ರೀತ್ ಸಿಂಗ್ ಸಂಧು ಮುನ್ನಡೆಸಿದರು.

**<><*<><>*><>**

ಬಿಜೆಪಿ ಹಿರಿಯ ನಾಯಕ ಮೋಹನ್ ಚರಣ್ ಮಾಂಝಿ, ಒಡಿಶಾದ ನೂತನ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಕೇಂದ್ರ ಸಚಿವರಾದ ರಾಜನಾಥ್ ಸಿಂಗ್ ಮತ್ತು ಭೂಪೇಂದರ್ ಯಾದವ್ ಅವರ ಉಪಸ್ಥಿತಿಯಲ್ಲಿ ಭುವನೇಶ್ವರದಲ್ಲಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ನೂತನ ನಾಯಕನನ್ನು ಆಯ್ಕೆ ಮಾಡಲಾಯಿತು. ಭುವನೇಶ್ವರದ ಜನತಾ ಮೈದಾನದಲ್ಲಿ ಇಂದು ನಡೆಯುವ ಸಮಾರಂಭದಲ್ಲಿ ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿಯಾಗಿ ಮೋಹನ್ ಚರಣ್ ಮಾಂಝಿ, ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಒಡಿಶಾ

ರಾಜ್ಯಪಾಲರಾದ ರಘುಬರ್ ದಾಸ್ ಅವರು, ನೂತನ ಮುಖ್ಯಮಂತ್ರಿಗೆ ಪ್ರಮಾಣವಚನ ಬೋಧಿಸಲಿದ್ದಾರೆ. ೧೪೭ ಸದಸ್ಯ ಬಲದ ವಿಧಾನಸಭೆಯಲ್ಲಿ ಬಿಜೆಪಿ ೭೮ ಸ್ಥಾನಗಳನ್ನು ಗೆದ್ದು, ರಾಜ್ಯದಲ್ಲಿ ಮೊದಲ ಬಾರಿಗೆ ಬಹುಮತ ಗಳಿಸಿದೆ. ಮುಖ್ಯಮಂತ್ರಿ ನವೀನ್ ಪಟ್ನಾಯಕ್ ನೇತೃತ್ವದಲ್ಲಿ ಬಿಜು ಜನತಾ ದಳದ ೨೪ ವರ್ಷಗಳ ಆಡಳಿತ ಈ ಮೂಲಕ ಕೊನೆಗೊಂಡಿದೆ.

<><*<><>*><>

ಆಂಧ್ರಪದೇಶದ ಮುಖ್ಯಮಂತ್ರಿಯಾಗಿದ ಎನ್.ಚಂದ್ರಬಾಬು ನಾಯ್ಡು ಇಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ವಿಜಯವಾಡದಲ್ಲಿ ನಡೆದ ಟಿಡಿಪಿ, ಜನಸೇನಾ ಮತ್ತು ಬಿಜೆಪಿ ಶಾಸಕರಿದ್ದ ಸಭೆಯಲ್ಲಿ ಚಂದ್ರಬಾಬು ನಾಯ್ಡು ಅವರನ್ನು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಜನಸೇನಾ ಪಕ್ಷದ ಮುಖ್ಯಸ್ಥ ಪವನ್ ಕಲ್ಯಾಣ್ ಅವರು, ಆಂಧ್ರಪ್ರದೇಶ ವಿಧಾನಸಭೆಗೆ ಎನ್‌ಡಿಎ ನಾಯಕರಾಗಿ ಚಂದ್ರಬಾಬು ಅವರ ಹೆಸರನ್ನು ಸೂಚಿಸಿದರು. ಇದಕ್ಕೆ ಎಲ್ಲ ಎನ್‌ಡಿಎ ಶಾಸಕರು ಬೆಂಬಲ ಸೂಚಿಸಿದರು. ೧೭೫ ಸದಸ್ಯಬಲದ ಆಂಧ್ರಪ್ರದೇಶ ವಿಧಾನಸಭೆಯಲ್ಲಿ ಎನ್‌ಡಿಎ ಮೈತ್ರಿಕೂಟವು ೧೬೪ ಸ್ಥಾನಗಳನ್ನು ಗೆಲ್ಲುವ ಮೂಲಕ ಐತಿಹಾಸಿಕ ವಿಜಯ ದಾಖಲಿಸಿತು. ಈ ಪೈಕಿ ಟಿಡಿಪಿ ೧೩೫, ಜನಸೇನಾ ೨೧ ಮತ್ತು ಬಿಜೆಪಿ ೮ ಸ್ಥಾನಗಳಲ್ಲಿ ಜಯಗಳಿಸಿದೆ. ಇದೇ ವೇಳೆ ನಿನ್ನೆ ನಡೆದ ಜನಸೇನಾ ಪಕ್ಷದ ಶಾಸಕಾಂಗ ಸಭೆಯಲ್ಲಿ ಪಕ್ಷದ ಪವನ್ ಕಲ್ಯಾಣ್ ಅವರನ್ನು ಆಂಧ್ರಪ್ರದೇಶ ವಿಧಾನಸಭೆಯ ಸಭಾನಾಯಕರನ್ನಾಗಿ ಆಯ್ಕೆ ಮಾಡಲಾಯಿತು. ಶಾಸಕ ಎನ್.ಮನೋಹರ್, ಸಭಾ ನಾಯಕನ ಸ್ಥಾನಕ್ಕೆ ಪವನ್ ಕಲ್ಯಾಣ್ ಅವರ ಹೆಸರನ್ನು ಸೂಚಿಸಿದರು. ಇದಕ್ಕೆ ಎಲ್ಲ ಶಾಸಕರು ಅವಿರೋಧವಾಗಿ ಬೆಂಬಲ ಸೂಚಿಸಿದರು. ಈ ನಡುವೆ ಸುದ್ದಿಗಾರರೊಂದಿಗೆ ಮಾತನಾಡಿದ ಚಂದ್ರಬಾಬು ನಾಯ್ಡು, ಆಂಧ್ರಪ್ರದೇಶದಲ್ಲಿ ಮೂರು ರಾಜಧಾನಿ ಎಂಬುದು ಇಲ್ಲ. ಅಮರಾವತಿ ಏಕೈಕ ರಾಜಧಾನಿಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಪ್ರಧಾನಮಂತ್ರಿ ಆವಾಸ್ ಯೋಜನೆ -ಪಿಎಂಎವೈ ಅಡಿಯಲ್ಲಿ ೩ ಕೋಟಿ ಗ್ರಾಮೀಣ ಮತ್ತು ನಗರ ಮನೆಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರ ಆರ್ಥಿಕ ನೆರವು ನೀಡಲು ನಿರ್ಧರಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಅರ್ಹ ಗ್ರಾಮೀಣ ಮತ್ತು ನಗರ ಕುಟುಂಬಗಳಿಗೆ ಮೂಲಭೂತ ಸೌಕರ್ಯಗಳೊಂದಿಗೆ ಮನೆಗಳ ನಿರ್ಮಾಣಕ್ಕೆ ನೆರವು ಒದಗಿಸಲು ಕೇಂದ್ರ ಸರ್ಕಾರವು ೨೦೧೫-೧೬ ರಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಯನ್ನು ಅನುಷ್ಠಾನಗೊಳಿಸುತ್ತಿದೆ. ಪಿಎಂಎವೈ ಅಡಿಯಲ್ಲಿ, ಕಳೆದ ೧೦ ವರ್ಷಗಳಲ್ಲಿ ವಸತಿ ಯೋಜನೆಗಳ ಅಡಿಯಲ್ಲಿ ಅರ್ಹ ಬಡ ಕುಟುಂಬಗಳಿಗಾಗಿ ಒಟ್ಟು ೪.೨೧ ಕೋಟಿ ಮನೆಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ. ಪಿಎಂಎವೈ ಅಡಿಯಲ್ಲಿ ನಿರ್ಮಿಸಲಾದ ಎಲ್ಲಾ ಮನೆಗಳಿಗೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ಇತರ ಯೋಜನೆಗಳ ಸಮನ್ವಯದೊಂದಿಗೆ ಶೌಚಾಲಯಗಳು, ಎಲ್ ಪಿ ಜಿ ಸಂಪರ್ಕ, ವಿದ್ಯುತ್ ಸಂಪರ್ಕ, ನಲ್ಲಿ ಸಂಪರ್ಕ ಮುಂತಾದ ಇತರ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಅರ್ಹ ಕುಟುಂಬಗಳ ಸಂಖ್ಯೆಯ ಹೆಚ್ಚಳದಿಂದ ಉಂಟಾಗುವ ವಸತಿ ಅವಶ್ಯಕತೆಗಳನ್ನು ಪೂರೈಸಲು ೩ ಕೋಟಿ ಹೆಚ್ಚುವರಿ ಗ್ರಾಮೀಣ ಮತ್ತು ನಗರ ಕುಟುಂಬಗಳಿಗೆ ಮನೆ ನಿರ್ಮಾಣಕ್ಕೆ ನೆರವು ನೀಡಲು ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಯಿತು.

<><*<><>*><>

ಮುಂದಿನ ಶೈಕ್ಷಣಿಕ ವರ್ಷದಿಂದ ಉನ್ನತ ಶಿಕ್ಷಣ ಸಂಸ್ಥೆಗಳು ವರ್ಷಕ್ಕೆ ಎರಡು ಬಾರಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಬಹುದು ಎಂದು ವಿಶ್ವವಿದ್ಯಾಲಯ ಧನ ಸಹಾಯ ಆಯೋಗ -ಯುಜಿಸಿ ತಿಳಿಸಿದೆ. ಪ್ರಸ್ತುತ, ಯುಜಿಸಿ ನಿಯಮಾವಳಿಗಳ ಪ್ರಕಾರ, ಒಂದು ಶೈಕ್ಷಣಿಕ ಅವಧಿಯಲ್ಲಿ ಒಮ್ಮೆ ಮಾತ್ರ ಕೋರ್ಸ್‌ಗೆ ಪ್ರವೇಶ ಪಡೆಯಲು ವಿದ್ಯಾರ್ಥಿಗಳಿಗೆ ಅವಕಾಶವಿತ್ತು. ಸುದ್ದಿಗಾರರೊಂದಿಗೆ ಮಾತನಾಡಿದ ಯುಜಿಸಿ ಮುಖ್ಯಸ್ಥ ಜಗದೀಶ್ ಕುಮಾರ್, ಶಿಕ್ಷಣ ಮಂಡಳಿಯಿಂದ ಫಲಿತಾಂಶಗಳ ಪ್ರಕಟಣೆಯಲ್ಲಿ ವಿಳಂಬ, ಆರೋಗ್ಯ ಸಮಸ್ಯೆಗಳು ಅಥವಾ ವೈಯಕ್ತಿಕ ಕಾರಣಗಳಿಂದ ಕೋರ್ಸ್‌ಗಳಿಗೆ ಪ್ರವೇಶವನ್ನು ಕಳೆದುಕೊಂಡಿರುವಂತಹ ಅನೇಕ ವಿದ್ಯಾರ್ಥಿಗಳಿಗೆ ಈ ಹೊಸ ನೀತಿಯು ಪ್ರಯೋಜನಕಾರಿಯಾಗಿದೆ ಎಂದು ಹೇಳಿದರು. ದ್ವೈವಾರ್ಷಿಕ ವಿಶ್ವವಿದ್ಯಾಲಯ ಪ್ರವೇಶವು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುತ್ತದೆ. ಏಕೆಂದರೆ ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಪ್ರವೇಶ ಪಡೆಯಲು ಒಂದು ಪೂರ್ಣ ವರ್ಷ ಕಾಯಬೇಕಾಗಿಲ್ಲ ಎಂದು ಯುಜಿಸಿ ಮುಖ್ಯಸ್ಥರಾದ ಜಗದೀಶ್ ಕುಮಾರ್ ತಿಳಿಸಿದರು.

<><*<><>*><>

ಜಮ್ಮು ಕಾಶ್ಮೀರದ ರಿಯಾಸಿಯಲ್ಲಿ ಯಾತ್ರಾರ್ಥಿ ಬಸ್ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ ಎರಡು ದಿನಗಳ ನಂತರ, ಜಮ್ಮು ಮತ್ತು ಕಾಶ್ಮೀರದ ಗಡಿ ಜಿಲ್ಲೆ ಕಥುವಾದ ಹೀರಾನಗರ ಸೆಕ್ಟರ್‌ನ ಹಳ್ಳಿಯೊಂದರಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಒಬ್ಬ ಉಗ್ರನನ್ನು ಹತ್ಯೆ ಮಾಡಲಾಗಿದೆ ಮತ್ತು ಇಬ್ಬರು ಉಗ್ರರನ್ನು ಬಂಧಿಸಲಾಗಿದೆ. ಕಥುವಾ ಜಿಲ್ಲೆಯ ಅಂತರಾಷ್ಟ್ರೀಯ ಗಡಿಗೆ ಸಮೀಪವಿರುವ ಹೀರಾ ನಗರ ಸೆಕ್ಟರ್‌ನ ಸೇದಾ ಸೋಹಲ್ ಗ್ರಾಮದಲ್ಲಿ ೨ ರಿಂದ ೩ ಭಯೋತ್ಪಾದಕರ ಗುಂಪು ಕಾಣಿಸಿಕೊಂಡಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. “ಭಯೋತ್ಪಾದಕರು ಬಲವಂತವಾಗಿ ಮನೆಯೊಂದಕ್ಕೆ ನುಗ್ಗಿ ನೀರು ಕೇಳಿದರು. ಮನೆಯಲ್ಲಿದ್ದ ತಂದೆ ಮತ್ತು ಮಗ ಇಬ್ಬರೂ ಓಡಿಹೋದರು. ಈ ವೇಳೆ ಉಗ್ರರು ಅವರ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿದರು” ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗುಂಡಿನ ಸದ್ದು ಕೇಳಿದ ನಂತರ ಪೊಲೀಸರು ಸ್ಥಳಕ್ಕೆ ಧಾವಿಸಿದರು. ಪೊಲೀಸರ ಮೇಲೂ ಉಗ್ರರು ಗುಂಡಿನ ದಾಳಿ ನಡೆಸಿದರು. ಇದಕ್ಕೆ ಪ್ರತಿಯಾಗಿ ಗುಂಡಿನ ದಾಳಿ ನಡೆಸಿದ ಒಬ್ಬ ಉಗ್ರ ಹತನಾದ. ಇಬ್ಬರು ಉಗ್ರರನ್ನು ಬಂಧಿಸಲಾಯಿತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ ಪ್ರದೇಶದಲ್ಲಿ ಭದ್ರತೆಯನ್ನು ಬಿಗಿಗೊಳಿಸಲಾಗಿದೆ. ಹೆಚ್ಚುವರಿ ಪೊಲೀಸ್, ಸೇನೆ ಮತ್ತು ಸಿಆರ್‌ಪಿಎಫ್ ಯೋಧರನ್ನು ನಿಯೋಜಿಸಲಾಗಿದೆ.

<><*<><>*><>

ಜಗತ್ ಪ್ರಸಿದ್ಧ ಸರೋದ್ ವಾದಕ, ಪದ್ಮಶ್ರೀ ಪುರಸ್ಕೃತ ಪಂಡಿತ್ ರಾಜೀವ್ ತಾರಾನಾಥ್ ಕರ್ನಾಟಕದ ಮೈಸೂರಿನಲ್ಲಿ ನಿಧನರಾದರು. ಅವರಿಗೆ ೯೧ ವರ್ಷ ವಯಸ್ಸಾಗಿತ್ತು. ಇಂದು ಅವರ ಅಂತ್ಯಕ್ರಿಯೆ ನಡೆಯಲಿದೆ. ಪಂಡಿತ್ ತಾರಾನಾಥ್ ಅವರ ಪಾರ್ಥಿವ ಶರೀರವನ್ನು ಕುವೆಂಪುನಗರದ ಜ್ಞಾನಗಂಗಾ ಶಾಲೆಯ ಬಳಿ ಇರುವ ಅವರ ನಿವಾಸದಲ್ಲಿ ಇಂದು ಬೆಳಿಗ್ಗೆ ೯:೩೦ ರಿಂದ ಮಧ್ಯಾಹ್ನದವರೆಗೆ ಸಾರ್ವಜನಿಕ ದರ್ಶನಕ್ಕೆ ಇಡಲಾಗುವುದು. ಮಧ್ಯಾಹ್ನದ ನಂತರ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತದಲ್ಲಿ ಖ್ಯಾತರಾಗಿದ್ದ ಪಂಡಿತ್ ರಾಜೀವ್ ತಾರಾನಾಥ್, ವಯೋ ಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ತೀವ್ರ ಅಸ್ವಸ್ಥರಾಗಿ ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ತಾರಾನಾಥ್ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ೧೯೩೨ ರ ಅಕ್ಟೋಬರ್ ೧೭ ರಂದು ಬೆಂಗಳೂರಿನಲ್ಲಿ ಜನಿಸಿದ ರಾಜೀವ್ ತಾರಾನಾಥ್ ತಮ್ಮ ತಂದೆ ಪಂಡಿತ್ ತಾರಾನಾಥ್ ಅವರಿಂದ ಗಾಯನ ಸಂಗೀತದಲ್ಲಿ ಆರಂಭಿಕ ತರಬೇತಿಯನ್ನು ಪಡೆದು, ಅತ್ಯಂತ ಕಿರಿಯ ವಯಸ್ಸಿನಲ್ಲೇ ಅಂದರೆ ೯ನೇ ವಯಸ್ಸಿನಲ್ಲಿ ಸಾರ್ವಜನಿಕ ಕಾರ್ಯಕ್ರಮ ನೀಡಿದ್ದರು.

೨೦ನೇ ವಯಸ್ಸಿನಲ್ಲಿ ಅಕಾಶವಾಣಿ ರೇಡಿಯೋದಲ್ಲಿ ವಿಶೇಷ ಕಾರ್ಯಕ್ರಮ ನೀಡಿದ್ದರು. ಮಹಾನ್ ಸರೋದ್ ಮಾಂತ್ರಿಕ ಎಂದೇ ಪ್ರಸಿದ್ಧರಾಗಿದ್ದ ಉಸ್ತಾದ್ ಅಲಿ ಅಕ್ಬರ್ ಖಾನ್ ಅವರ ಶಿಷ್ಯರಾದ ತಾರಾನಾಥ್ ಅವರು ಪಂಡಿತ್ ರವಿಶಂಕರ್ ಮತ್ತು ಅನ್ನಪೂರ್ಣ ದೇವಿಯವರ ಮಾರ್ಗದರ್ಶನವನ್ನೂ ಪಡೆದರು. ಪಂಡಿತ್ ರಾಜೀವ್ ತಾರಾನಾಥ್ ಅವರಿಗೆ ೨೦೧೯ ರಲ್ಲಿ ಪದ್ಮಶ್ರೀ ಮತ್ತು ೨೦೦೦ ರಲ್ಲಿ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರ ಸಂದಿವೆ.

<><*<><>*><>

೨೦೨೪ರ ಐಸಿಸಿ ಟಿ೨೦ ವಿಶ್ವಕಪ್‌ನಲ್ಲಿ ಪಾಕಿಸ್ತಾನ ಕೊನೆಗೂ ಗೆಲುವಿನ ಖಾತೆ ತೆರೆದಿದೆ. ನಿನ್ನೆ ಕೆನಡಾ ವಿರುದ್ಧ ನಡೆದ ಪಂದ್ಯದಲ್ಲಿ ೭ ವಿಕೆಟ್‌ಗಳ ಗೆಲುವು ಸಾಧಿಸಿದೆ. ಅಮೆರಿಕಾದ ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಇಂಟರ್ನ್ಯಾಷನಲ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ ತಂಡ ಆರೋನ್ ಜಾನ್ಸನ್ ಅವರ ಅರ್ಧಶತಕದ ನೆರವಿನಿಂದ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೦೬ ರನ್ ಗಳಿಸಿತ್ತು. ಗೆಲುವಿಗೆ ೧೦೭ ರನ್‌ಗಳ ಸಾಧಾರಣ ಗುರಿ ಬೆನ್ನತ್ತಿದ ಪಾಕಿಸ್ತಾನ, ಮೊಹಮ್ಮದ್ ರಿಜ್ವಾನ್ ಅವರ ಅಜೇಯ ಅರ್ಧಶತಕದ ನೆರವಿನಿಂದ ೧೭.೩ ಓವರ್‌ಗಳಲ್ಲಿ ೩ ವಿಕೆಟ್ ಕಳೆದುಕೊಂಡು ೭ ವಿಕೆಟ್‌ಗಳಿಂದ ಗೆದ್ದು ಬೀಗಿದೆ. ಪಾಕ್ ಪರ, ಆರಂಭಿಕರಾದ ಸೈಮ್ ಅಯುಬ್ ೬ ರನ್ ಗಳಿಸಿ ಔಟಾದರು. ಈ ವೇಳೆ ಮೊಹಮ್ಮದ್ ರಿಜ್ವಾನ್ ಹಾಗೂ ಬಾಬರ್ ಅಜಮ್ ಅವರು ೨ ವಿಕೆಟ್‌ಗೆ ೬೩ ರನ್‌ಗಳ ಜೊತೆಯಾಟದೊಂದಿಗೆ ತಂಡವನ್ನು ಗೆಲುವಿನ ದಡದತ್ತ ಕೊಂಡೊಯ್ದರು. ಮೊಹಮ್ಮದ್ ರಿಜ್ವಾನ್ ೫೩ ಎಸೆತಗಳಲ್ಲಿ ಎರಡು ಬೌಂಡರಿ ಹಾಗೂ ಒಂದು ಸಿಕ್ಸರ್ ಮೂಲಕ ಅಜೇಯ ೫೩ ರನ್ ಬಾರಿಸಿದರು. ಉಳಿದಂತೆ ಫಖರ್ ಜಮಾನ್ ೪ ರನ್ ಮತ್ತು ಉಸ್ಮಾನ್ ಖಾನ್ ೨ ರನ್ ಗಳಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**